ಮುಂಡಗೋಡು		—
ಸಿದ್ಧಾಪುರ	291	ಕೋಲ್ ಸಿರಸಿ
	292	ಸಿದ್ಧಾಪುರ
ಯಲ್ಲಾಪುರ	293	ಯಲ್ಲಾಪುರ

ಸರ್ವ ಶಿಕ್ಷಣ ಅಭಿಯಾನದ ಮೂಲಭೂತ ಸೌಕರ್ಯ

783 (1365) ಶ್ರೀ ಪಾಟೀಲ್ ಎಂ.ಬಿ (ಬಬಲೇಶ್ವರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2010–11ನೇ ವರ್ಷದಲ್ಲಿ ಸರ್ವ ಶಿಕ್ಷಣ ಅಭಿಯಾನ ಯೋಜನೆಯಲ್ಲಿ ವಿಜಾಪುರ ಜಿಲ್ಲೆ ಬಬಲೇಶ್ವರ ಮತ ಕ್ಷೇತ್ರದಲ್ಲಿ ಪ್ರಾಥಮಿಕ ಶಾಲೆಗಳಿಗೆ ನಿರ್ಮಿಸಲು ಉದ್ದೇಶಿಸಿರುವ ಕೊಠಡಿಗಳ ಸಂಖ್ಯೆ ಎಷ್ಟು;

ಆ) ಇವುಗಳಿಗೆ ಕಾಂಪೌಂಡ್ ಕಟ್ಟಿಸುವ ಆಲೋಚನೆ ಸರ್ಕಾರದ ಮುಂದಿದೆಯೇ;

ಇ) ವಿಜಾಪುರ ಜಿಲ್ಲೆ ಬಬಲೇಶ್ವರ ಮತ ಕ್ಷೇತ್ರದಲ್ಲಿ ಬಿಸಿಯೂಟ ಪ್ರಾರಂಭಿಸಿದ ಶಾಲೆಗಳ ಸಂಖ್ಯೆ ಎಷ್ಟು;

ಈ) ಇವುಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಇರುವ ಶಾಲೆಗಳ ಸಂಖ್ಯೆ ಎಷ್ಟು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) 01 (ಒಂದು)

ಆ) 2010–11ನೇ ಸಾಲಿನಲ್ಲಿ ಸರ್ವ ಶಿಕ್ಷಣ ಅಭಿಯಾನ ಯೋಜನೆಯಡಿಯಲ್ಲಿ ಕಾಂಪೌಂಡ್ ಕಾಮಗಾರಿಗಾಗಿ ಕೇಂದ್ರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗುತ್ತಿದ್ದು, ಅನುದಾನ ಅನುಮೋದನೆಯಾದಲ್ಲಿ ಈ ಕುರಿತು ಕ್ರಮಕೈಗೊಳ್ಳಲಾಗುವುದು.

ಇ) 246.

ಈ) 85. ಉಳಿದ ಶಾಲೆಗಳಿಗೆ ಗ್ರಾಮ ಪಂಚಾಯತ್ ಕುಡಿಯುವ ನೀರಿನ ಯೋಜನೆ ಮೂಲಕ, ಸಮೂಹ ಕೊಳವೆ ಬಾವಿ ಮೂಲಕ ತಾತ್ಕಾಲಿಕ ವ್ಯವಸ್ಥೆ ಮಾಡಲಾಗಿದೆ.